# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 470
2. ಸದಸ್ಯರ ಹೆಸರು : ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ
3. ಉತ್ತರಿಸಬೇಕಾದ ದಿನಾಂಕ : 22.12.2022
4. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ರಾಜ್ಯದಲ್ಲಿ ಅಂತರ್ಜಲ ಮಟ್ಟ ಎಷ್ಟಿದೆ; ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ. | 2022ರ ಸಾಲಿನಲ್ಲಿ ಹೊಸದಾಗಿ ಪ್ರಾರಂಭಿಸಿದ 06 ತಾಲ್ಲೂಕುಗಳು ಸೇ 233 ತಾಲ್ಲೂಕುಗಳ . ಜನವರಿ-2022ರಿಂದ ಅಕ್ಟೋಬರ್-2022 ಮಾಹೆಯವರೆಗೆ ತಾಲ್ಲೂಕುವಾರು ಅಂತರ್ಜಲ ಸ್ಥಿರ ಜಲಮಟ್ಟ ವರದಿಯಂ ಒಟ್ಟು 222 ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಏರಿಕೆ ಮತ್ತು 1 ತಾಲ್ಲೂಕುಗಳಲ್ಲಿ ಮಾತ್ರ ಅಂತರ್ಜಲ ಮಟ್ಟ ಕುಸಿತ ಕಂಡುಬಂದಿರುತ್ತದೆ.<br>ರಾಜ್ಯದಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸಣ್ಣ ನೀರಾವರಿ ಮತ ಅಂತರ್ಜಲ ಅಭಿವೃದ್ಧಿ ಇಲಾಖೆಯಡಿ ಅಂತರ್ಜಲ ಮಟ್ಟ ಹೆಚ್ಚಿಸಲು ಇಂಗುಕೆರೆ ಚೆಕ್ ಡ್ಯಾಂ ಬಿ.ಸಿ.ಬಿ. ನಿರ್ಮಾಣ ಕಾಮಗಾರಿಗಳನ್ನು ಹಾಗೂ ಕೆರೆಗಳನ್ನು ತುಂಬಿಸುವ ಯೋಜನೆ ಕೈಗೊಳ್ಳುವ ಮೂಲಕ ಮರುಪೂರಣಗೊಳಿಸಲು ಕ್ರಮ ವಹಿಸಲಾಗುತ್ತಿದೆ. |
| ಆ | ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ; ಸರ್ಕಾರವು ಅಂತರ್ಜಲ ಮಟ್ಟ ಕುಸಿತವನ್ನು ತಡೆಗಟ್ಟುವ ಸಲುವಾಗಿ ದೂರದೃಷ್ಟಿಯುಳ್ಳ ಯಾವ ಯಾವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿದೆ; | ಅಂತರ್ಜಲ ನಿರ್ದೇಶನಾಲಯದ ವತಿಯಿಂದ ಅಂತರ್ಜಲ ಅಭಿವೃದ್ಧಿ ಸದ್ಬಳಕೆ ಮತ್ತು ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು/ಶಾಲಾ ಕಾಲೇಜು ಮಟ್ಟದಲ್ಲಿ ಜನ ಜಾಗೃತಿ ಶಿಬಿರಗಳನ್ನು ಆಯೋಜಿಸುವುದು, ಪಿಡಿಓ ಮತ್ತು ಇತರೆ ಲೈನ್ ಇಲಾಖೆಯ ಅಧಿಕಾರಿಗಳಿಗೆ ಕಾರ್ಯಾಗಾರವನ್ನು ಆಯೋಜಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.<br>ಅಂತರ್ಜಲ ಮಟ್ಟದ ಏರಿಳಿತವನ್ನು ಅಧ್ಯಯನ ನಡೆಸುವ ಸಲುವಾಗಿ ರಾಜ್ಯದಲ್ಲಿ ಅಂತರ್ಜಲ ನಿರ್ದೇಶನಾಲಯವು ಹೊಂದಿರುವ ಅಧ್ಯಯನ ಕೊಳವೆಬಾವಿಗಳಿಗೆ ಸ್ವಯಂಚಾಲಿತ ಜಲಮಟ್ಟ ಮಾಪಕಗಳನ್ನು ಅಳವಡಿಲಾಗಿರುತ್ತದೆ. ಸದರಿ ಮಾಪಕಗಳಿಂದ ದತ್ತಾಂಶಗಳನ್ನು ಪಡೆದು ವಿಶ್ಲೇಷಿಸಿ ಅಂತರ್ಜಲ ಮಟ್ಟ ಇಳಿಕೆಯಾಗುತ್ತಿರುವ ಪ್ರದೇಶದಲ್ಲಿ ಹೆಚ್ಚು ಹೆಚ್ಚು ಅಂತರ್ಜಲ ಮರುಪೂರಣ ರಚನೆಗಳ ನಿರ್ಮಾಣ ಕಾರ್ಯವನ್ನು ಹಮ್ಮಿಕೊಳ್ಳುವುದರ ಮೂಲಕ ಅಂತರ್ಜಲ ಕುಸಿತವನ್ನು ತಡೆಗಟ್ಟಬಹುದಾಗಿರುತ್ತದೆ. |
| ಇ | ಅನುಮತಿ ಪಡೆಯದೇ ಬೇಕಾಬಿಟ್ಟಿಯಾಗಿ ಕೊಳವೆ ಬಾವಿಗಳನ್ನು ಆಳವಾಗಿ ಕೊರೆದು ಅಂತರ್ಜಲವನ್ನು ಪೋಲು ಮಾಡುವ ಪ್ರವೃತ್ತಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು? | ರಾಜ್ಯದಲ್ಲಿ ಅಂತರ್ಜಲವನ್ನು ಅನಿಯಮಿತವಾಗಿ ಮತ್ತು ನಿಯಂತ್ರಣವಿಲ್ಲದೆ ಬಳಸುತ್ತಿರುವುದನ್ನು ನಿಯಂತ್ರಿಸಲು ಹಾಗೂ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರವು ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ಅಧಿನಿಯಮ |

2011ನ್ನು ಮತ್ತು ನಿಯಮಾವಳಿಗಳು 2012ನ್ನು ಜಾರಿಗೆ ತಂದಿರುತ್ತದೆ.

ಈ ಅಧಿಸೂಚನೆಯನ್ವಯ ಅಧಿನಿಯಮವನ್ನು ಅನುಷ್ಠಾನಗೊಳಿಸಿ ಕಾರ್ಯನಿರ್ವಹಿಸಲು ಅನುವಾಗುವಂತೆ, ಬೆಂಗಳೂರನ್ನು ಕೇಂದ್ರ ಕಛೇರಿಯನ್ನಾಗಿಸಿ ಕರ್ನಾಟಕ ಅಂತರ್‌ಜಲ ಪ್ರಾಧಿಕಾರವನ್ನು ರಚಿಸಿ ಆದೇಶಿಸಲಾಗಿರುತ್ತದೆ.

ಸದರಿ ಪ್ರಾಧಿಕಾರವನ್ನು ಸರ್ಕಾರದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಒಟ್ಟು 19 ಸದಸ್ಯರನ್ನು ಒಳಗೊಂಡ ಕರ್ನಾಟಕ ಅಂತರ್ಜಲ ಪ್ರಾಧಿಕಾರವನ್ನು ರಚಿಸಲಾಗಿದೆ.

ಪ್ರಾಧಿಕಾರದ ಪರವಾಗಿ ಅಧಿನಿಯಮ 2011 ಅನುಷ್ಠಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಒಟ್ಟು 8 ಸದಸ್ಯರಿರುವ ಜಿಲ್ಲಾ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶ ಹೊರಡಿಸಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಧಾನ ಇಂಜಿನಿಯರ್‌ರವರ ಅಧ್ಯಕ್ಷತೆಯಲ್ಲಿ ಒಟ್ಟು 16 ಸದಸ್ಯರನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗಿದೆ.

ಕರ್ನಾಟಕ ಅಂತರ್ಜಲ ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ ಅಧಿನಿಯಮ 2011 ಮತ್ತು ನಿಯಮಾವಳಿ 2012ರ ಪ್ರಕಾರ ಸರ್ಕಾರದಿಂದ ಅಧಿಸೂಚಿಸಲ್ಪಡುವ, ಅಂತರ್ಜಲ ಅತಿಬಳಕೆ ಎಂದು ಅಧಿಸೂಚಿತ ತಾಲ್ಲೂಕುಗಳಲ್ಲಿ ಮಾತ್ರ ಹೊಸದಾಗಿ ಕೊಳವೆಬಾವಿಗಳನ್ನು ಕೊರೆಯಲು ಕರ್ನಾಟಕ ಅಂತರ್ಜಲ ಪ್ರಾಧಿಕಾರದ ಅನುಮತಿ ಪಡೆಯಬೇಕಾಗಿರುತ್ತದೆ. ಪ್ರಸ್ತುತ ಸರ್ಕಾರದ ಆದೇಶದನ್ವಯ ರಾಜ್ಯದ 45 ತಾಲ್ಲೂಕುಗಳನ್ನು ಅಧಿಸೂಚಿತ ತಾಲ್ಲೂಕುಗಳನ್ನಾಗಿ ವರ್ಗೀಕರಿಸಿದ್ದು, ಯಾವುದೇ ಉದ್ದೇಶಕ್ಕಾಗಿ ಕೊಳವೆಬಾವಿ ಕೊರೆಸಲು/ತೋಡಲು ಇಚ್ಚಿಸಿದಲ್ಲಿ, ಆ ಉದ್ದೇಶಕ್ಕೆ ಕೋರಿ ಜಿಲ್ಲಾ ಅಂತರ್ಜಲ ಸಮಿತಿಗೆ ಅರ್ಜಿ ಸಲ್ಲಿಸಿ, ಅನುಮತಿ ಪಡೆದು ಕೊಳವೆಬಾವಿ ಕೊರೆಸತಕ್ಕದ್ದು. ಈಗಾಗಲೇ ಅಧಿಸೂಚನೆಗಿಂತ ಮುಂಚಿತವಾಗಿ ಕೊರೆದಿರುವ ಕೊಳವೆಬಾವಿಗಳನ್ನು ಜಿಲ್ಲಾ ಅಂತರ್ಜಲ ಸಮಿತಿಯಲ್ಲಿ ನೋಂದಣಿ ಮಾಡಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಹೊಸ ಕೊಳವೆಬಾವಿ ಕೊರೆಸಲು ಬಂದಿರುವ ಅರ್ಜಿಗಳನ್ನು ಜಿಲ್ಲಾ ಅಂತರ್ಜಲ ಸಮಿತಿ ಸಭೆಯಲ್ಲಿ ಮಂಡಿಸಿ ಸಭೆಯ ನಿರ್ಣಯದಂತೆ ಅರ್ಜಿ ವಿಲೇವಾರಿಗೆ ಕ್ರಮ ವಹಿಸಲಾಗುತ್ತಿದೆ.

ಕಡತ ಸಂಖ್ಯೆ:MID 169 LCQ 2022

(ಜೆ.ಸಿ.ಮಾಧುಸ್ವಾಮಿ)

ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು.